**ದಿನಾಂಕಃ 26-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.**

ನಾನು ಈ ದಿನ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಸದರಿ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಇರುವ ಎಲ್ಲಾ ವಿಷಯಗಳು ಸತ್ಯವಾಗಿವೆ.

**ಮುಖ್ಯ ವಿಚಾರಣೆ: 2 ನೇ ಎದುರುದಾರರ ಪರ ಶ್ರೀ. N.D ವಕೀಲರಿಂದಃ**

| | | |
|---|---|---|
| ನಿ.ಆರ್-1 | : | ಅಧಿಕಾರ ಪತ್ರ, |
| ನಿ.ಆರ್-2 | : | ವಿಮಾ ಪಾಲಿಸಿ, |
| ನಿ.ಆರ್-3 | : | 1 ನೇ ಎದುರುದಾರರಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿ, |
| ನಿ.ಆರ್-4 | : | ಅಂಚೆ ರಶೀದಿ |
| ನಿ.ಆರ್-5 | : | ಜಾರಿಯಾಗದೆ ವಾಪಸ್ಸು ಬಂದ ಅಂಚೆ ಲಕೋಟೆ |
| ನಿ.ಆರ್-5(ಎ) | : | ಲಕೋಟೆಯಲ್ಲಿರುವ ನೋಟಿಸಿನ ಪ್ರತಿ |

ಎಂದು ಗುರುತಿಸಲಾಯಿತು.

2 ನೇ ಎದುರುದಾರರ ವಿರುದ್ಧ ಸಲ್ಲಿಸಿರುವ ಅರ್ಜಿಯನ್ನು ವಜಾಗೊಳಿಸಬೇಕೆಂದು ಪ್ರಾರ್ಥಿಸುತ್ತೇನೆ .

**ಪಾಟೀ ಸವಾಲುಃ ಅರ್ಜಿದಾರರ ಪರ ಶ್ರೀ ವಿ ಸಿ ಬಿ ವಕೀಲರಿಂದಃ**

1. ನಮ್ಮ ವಿಮೆಗೆ ಒಳಪಟ್ಟ ಕೆ ಎ 17 ಡಿ 6149 ನೇದ್ದರ ವಾಹನದ ಚಾಲಕನ ತಪ್ಪಿನಿಂದಲೆ ಅಪಘಾತ ಆಗಿದೆ ಎಂದು ಕೊಟ್ಟೂರು ಪೋಲಿಸರು ನಿಪಿ-7 ರಂತೆ ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತಾರೆ ಎಂದರೆ ಸರಿ. ಆ ದೋಷಾರೋಪಣೆ ಪಟ್ಟಿಯನ್ನು ಪ್ರಶ್ನೆ ಮಾಡಿದ್ದೀರಾ ಎಂದರೆ ಸಾಕ್ಷಿ ನಾವು ಅದರಲ್ಲಿ ಪಕ್ಷಗಾರರಾಗಿರದ ಕಾರಣ ಅದನ್ನು ಪ್ರಶ್ನೆ ಮಾಡಿಲ್ಲ ಎಂದು ಹೇಳುತ್ತಾರೆ. ಸಾಕ್ಷಿ ಮುಂದುವರೆದು ಪೋಲಿಸರು ಸುಳ್ಳು ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತಾರೆ ಎಂದು ಹೇಳುತ್ತಾರೆ.

R.W-1

ನಾನು ಕಣ್ಣಾರೆ ಅಪಘಾತ ನೋಡಿರುವುದಿಲ್ಲ. ದಾಖಲೆಗಳ ಆಧಾರದ ಮೇಲೆ ಸಾಕ್ಷಿ ಹೇಳುತ್ತಿದ್ದೇನೆ. ಪೋಲಿಸರು ಸರಿಯಾಗಿ ತನಿಖೆ ಮಾಡಿ, ಗೂಡ್ಸ ವಾಹನದ ಚಾಲಕನ ತಪ್ಪಿನಿಂದಲೆ ಅಪಘಾತ ಆಗಿದ್ದರಿಂದ ಆತನ ವಿರುದ್ದವೆ ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿ ಹರಪನಹಳ್ಳಿ ನ್ಯಾಯಾಲಯದಲ್ಲಿ ತಪ್ಪನ್ನು ಒಪ್ಪಿಕೊಂಡು ದಂಡ ಪಾವತಿಸಿರುತ್ತಾರೆ ಎಂದರೆ ಸಾಕ್ಷಿ ಅದು ನಮ್ಮ ಗಮನಕ್ಕೆ ಬಂದಿಲ್ಲ ಎಂದು ಹೇಳುತ್ತಾರೆ. ಅರ್ಜಿದಾರರಿಗೆ ಪರಿಹಾರ ಕೊಡಬೇಕಾಗುತ್ತದೆ ಎಂದು ಬಾಧ್ಯತೆಯಿಂದ ತಪ್ಪಿಸಿಕೊಳ್ಳುವುದಕ್ಕಾಗಿ ಗೂಡ್ಸ ವಾಹನದ ಚಾಲಕನ ತಪ್ಪಿನಿಂದ ಅಪಘಾತ ಆಗಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/-

1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,

ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.